ವಿಷಯ :– ನೆಲಮಂಗಲ ಆಸ್ಪತ್ರೆಗೆ ದಂತ ವೈದ್ಯರ ನೇಮಕ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 594 (921)

ಶ್ರೀ ಆಂಜನಮೂರ್ತಿ (ನೆಲಮಂಗಲ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ನೆಲಮಂಗಲ ಟೌನ್‌ನಲ್ಲಿರುವ ದಂತ ಚಿಕಿತ್ಸಾಲಯದಲ್ಲಿ ರೋಗಿಗಳ ಹಿತದೃಷ್ಟಿಯಿಂದ ಸರಿಯಾದ ಉಪಕರಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಆ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

ಇ) ಕಳೆದ ಸುಮಾರು ದಿನಗಳಿಂದ ಅಲ್ಲಿ ದಂತ ಚಿಕಿತ್ಸಾ ವೈದ್ಯರಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಈ) ಹಾಗಿದ್ದಲ್ಲಿ ಅಲ್ಲಿ ವೈದ್ಯರನ್ನು ನೇಮಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

ಶ್ರೀಮತಿ ಕೆ. ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :–

ಅ) ಇಲ್ಲ.

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಹೌದು.

ಈ) ಸರ್ಕಾರಿ ಆಧಿಸೂಚನೆ ಸಂಖ್ಯೆ ಆಕುಕ 621 ಹೆಚ್‌ಎಸ್‌ಪಿಚ್. 86 ದಿನಾಂಕ 11–12–90ರಲ್ಲಿ ಡಾ.ಆರ್ ವಿಜಯೇಂದ್ರ, ಸಹಾಯಕ ದಂತ ಚಿಕಿತ್ಸಕರು ಇವರನ್ನು ನೇಮಿಸಲಾಗಿದೆ.

ವಿಷಯ :– ರಾಜ್ಯದ ಎಲ್ಲ ವಿಶ್ವವಿದ್ಯಾನಿಲಯಗಳಲ್ಲಿರುವ ಹಂಗಾಮಿ ಶಿಕ್ಷಕರನ್ನು ಖಾಯಂ ಗೊಳಿಸುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 596 (978)

ಶ್ರೀ ಆಂಜನಮೂರ್ತಿ (ನೆಲಮಂಗಲ) :– ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಎಷ್ಟು ಜನ ಹಂಗಾಮಿ ಅಧ್ಯಾಪಕರಿದ್ದಾರೆ ?

ಆ) ಇವರ ಸೇವೆಯನ್ನು ಖಾಯಂಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಇ) ಇವರಲ್ಲಿ ಎಷ್ಟು ಜನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದ ಅಧ್ಯಾಪಕರಿದ್ದಾರೆ ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮಂತ್ರಿಗಳು) :–

ಅ) ಒಂದುನೂರು.

ಆ) 1987 ರ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಶಿಕ್ಷಕರ (ಹಂಗಾಮಿ ಉಪನ್ಯಾಸಕರ ವಿಲೀನೀಕರಣ) ಕಾಯ್ದೆಯ ಪ್ರಕಾರ ಕ್ರಮ ತೆಗೆದುಕೊಳ್ಳಲಾಗಿದೆ.

ಇ) ಪರಿಶಿಷ್ಟ ಜಾತಿ : ಒಂಭತ್ತು. ಪರಿಶಿಷ್ಟ ವರ್ಗ : ಒಂದು.

ವಿಷಯ : ಬೆಂಗಳೂರು ನಗರದ ಕೆಲವು ಬೀದಿಗಳ ಹೆಸರುಗಳನ್ನು ಬದಲಾಯಿಸುವ ಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 598 (675)

ಶ್ರೀ ಆಂಜನಮೂರ್ತಿ (ನೆಲಮಂಗಲ) :– ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?